# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ ೩೧, ಅಕ್ಟೋಬರ್, ೨೦೨೫ (ಕಾರ್ತಿಕಾ , ೦೯, ಶಕವರ್ಷ, ೧೯೪೭)<br>BENGALURU, FRIDAY 31, OCTOBER, 2025 ( KARTHIKA , 09, SHAKAVARSHA, 1947) | ನಂ. ೬೮೦<br>No. 680 |
|---|---|---|


**<u>Government of Karnataka</u>**

**No.**RDP 815 GPA 2025

Karnataka Government Secretariat,
Vidhana Soudha,
Bengaluru, dated:31-10-2025.

## NOTIFICATION

The draft of the following Bye-Laws further to amend the Karnataka Grama Swaraj and Panchayath Raj (Zilla Panchayaths, Taluka Panchayaths and Grama Panchayaths control over Erection of Buildings) Model Bye-Laws, 2015 which the Government of Karnataka proposes to make, in exercise of the powers conferred by section 316 read with the sections 64 and 315 of the Karnataka Grama Swaraj and Panchayath Raj Act, 1993 (Karnataka 14 of 1993) is here by published as required by sub section (1) of section 316 of the said Act for the information of all persons likely to be affected thereby and notice is hereby given that the said draft will be taken into consideration after seven days from the date of its publication in the official Gazette.

Any objections and suggestions which may be received by the State Government from any person with respect to the said draft before the expiry of the period specified above will be considered by the State Government. Objections and suggestions may be addressed to the Secretary to Government (Panchayat Raj), Rural Development and Panchayath Raj Department, 3rd Floor, 3rd gate, Multi Stored Building, Dr. B.R. Ambedkar Veedhi, Bengaluru -560 001.

**DRAFT BYE-LAWS**

1. **Title and Commencement**.- (1) These Bye-Laws may be called the Karnataka Grama Swaraj and Panchayath Raj (Zilla Panchayaths, Taluka Panchayaths and Grama Panchayaths control over Erection of Buildings)(Second Amendment) Model Bye-Laws, 2025.

(2) They shall come into force from the date of their final publication in the official Gazette.

2. **Amendment of clause 13.-** In the Karnataka Grama Swaraj and Panchayath Raj (Zilla Panchayaths, Taluka Panchayaths and Grama Panchayaths control over Erection of Buildings)(Second Amendment) Model Bye-Laws, 2015, in clause 13, after the proviso the following proviso shall be inserted, namely:-

"Provided further that, the Government may notify the category of Building which shall be exempted from obtaining occupancy certificate."

By Order and in the
Name of Governor of Karnataka.

**(Dr II N. Nomesh Kumar)**
Director (Panchayat Raj) and Ex-Officio
Deputy Secretary to Government
Rural Development & Panchayath Raj Department.

**ಕರ್ನಾಟಕ ಸರ್ಕಾರ**

ಸಂಖ್ಯೆ: RDPR/ 815 /GPA/2025

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು ದಿನಾಂಕ:31-10-2025 .

**ಅಧಿಸೂಚನೆ**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣಗಳಾದ 315 ಮತ್ತು 64 ರೊಂದಿಗೆ ಓದಿಕೊಂಡಂತೆ ಪ್ರಕರಣ 316 ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪ ವಿಧಿಗಳು, 2015 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಉದ್ದೇಶಿಸಿರುವ ಕರಡು ಉಪ ವಿಧಿಗಳನ್ನು ಇದರಿಂದ ಬಾಧಿತರಾಗುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಸದರಿ ಅಧಿನಿಯಮದ ಪ್ರಕರಣ 316ರ ಉಪ ಪ್ರಕರಣ (1) ರಲ್ಲಿ ನಿಗದಿಪಡಿಸಿದಂತೆ ಪ್ರಕಟಿಸಲಾಗಿದೆ. ಈ ಮಾದರಿ ಉಪ ವಿಧಿಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಏಳು ದಿನಗಳೊಳಗಾಗಿ ಕಳುಹಿಸಲು ಈ ಮೂಲಕ ಸೂಚಿಸಲಾಗಿದೆ.

ಮೇಲೆ ನಿಗದಿಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡು ಮಾದರಿ ಉಪವಿಧಿಗಳಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಆಕ್ಷೇಪಣೆ ಮತ್ತು ಸಲಹೆಗಳನ್ನು, ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಹಂತ, 3ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು-01, ಇವರಿಗೆ ಕಳುಹಿಸಲು ಕೋರಲಾಗಿದೆ.

**ಕರಡು ಉಪ ವಿಧಿಗಳು**

1. **ಹೆಸರು ಮತ್ತು ಪ್ರಾರಂಭ.-** (1) ಈ ಉಪ ವಿಧಿಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತಿಗಳ, ತಾಲ್ಲೂಕು ಪಂಚಾಯತಿಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) (ಎರಡನೇ ತಿದ್ದುಪಡಿ) ಮಾದರಿ ಉಪ ವಿಧಿಗಳು, 2025 ಎಂದು ಕರೆಯತಕ್ಕದ್ದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



(2) ಇವು ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

**2. 13ನೇ ಉಪವಿಧಿ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತಿಗಳ, ತಾಲ್ಲೂಕು ಪಂಚಾಯತಿಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪ ವಿಧಿಗಳು, 2015ರ ಉಪ ವಿಧಿ 13ರ ಪರಂತು ನಂತರ ಈ ಕೆಳಕಂಡಂತೆ ಪರಂತು ನಮೂದಿಸತಕ್ಕದ್ದು.

"ಪರಂತು, ಸರ್ಕಾರವು ಅಧಿಭೋಗ ಪ್ರಮಾಣ ಪತ್ರವನ್ನು ಪಡೆಯುವುದರಿಂದ ವಿನಾಯಿತಿ ನೀಡಬಹುದಾದ ಕಟ್ಟಡದ ಪ್ರವರ್ಗವನ್ನು ಅಧಿಸೂಚಿಸಬಹುದು".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ|| ಎನ್. ನೋಮೇಶ್ ಕುಮಾರ್)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH